<u>ಬಂಟ್ವಾಳ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯದಲ್ಲಿ</u>

ಸಿಸಿ ನಂ. 1413/2020

ಫ್ರಾಸಾ : 07

ಚಾಸಾ : 09

| | | |
|---|---|---|
| ಹೆಸರು | : | ಚಂದ್ರಶೇಖರ |
| ತಂದೆಯ ಹೆಸರು | : | ಕೃಷ್ಣ ಮೂಲ್ಯ |
| ಫ್ರಾಯ | : | 35 ವರ್ಷ |
| ಉದ್ಯೋಗ | : | ಕೂಲಿ |
| ವಾಸಸ್ಥಳ | : | ವಿಟ್ಲ ಮೂಡ್ನರು ಗ್ರಾಮ |

---

ದಿಃ 13/01/2023 ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಭೋದಿಸಲಾಯಿತು.

---

<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>

1. ನಿಪಿ 2 ಮಹಜರಿನಲ್ಲಿನ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ 2(ಸಿ) ಎಂದು ಗುರುತಿಸಲಾಯಿತು. ದನ ಕಳವು ಆಗಿದೆ ಎಂಬ ವಿಚಾರಕ್ಕೆ ಸಂಬಂಧಿಸಿದಂತೆ ಉಕ್ಕುಡದಲ್ಲಿರುವ ಸರೋಜಿನಿಯವರ ಮನೆಗೆ ಪೋಲಿಸರು ಬಂದಿದ್ದಾಗ ಸದರಿ ದಾಖಲೆಗೆ ನಾನು ಸಹಿಯನ್ನು ಮಾಡಿರುತ್ತೇನೆ. ಸ್ಥಳದಲ್ಲಿ ನಾನು ಮತ್ತು ನವೀನ್ ಹಾಜರಿದ್ದು ಸಹಿಯನ್ನು ಮಾಡಿದೇವು. ಯಾವ ದಿನಾಂಕದಂದು ಎಷ್ಟು ಗಂಟೆಗೆ ಸಹಿಯನ್ನು ಮಾಡಿದೆವು ಎಂದು ಗೊತ್ತಿಲ್ಲ.

(ಈ ಹಂತದಲ್ಲಿ ಮಾನ್ಯ ಎ ಪಿಪಿ ಯವರು ಸದರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ ಎಪಿಪಿಯವರಿಂದಃ</u> -

2. ದಿಃ 21-05-2020 ರಂದು ಉಕ್ಕುಡದ ಒತ್ತೆಸಾರು ಎಂಬಲ್ಲಿ ಇದುವೇ ಕಳ್ಳತನ ಆದ ಕೊಟ್ಟಿಗೆ ಸ್ಥಳ ಎಂದು ಚಾಸಾ 1 ರವರು ತೋರಿಸಿಕೊಟ್ಟಂತೆ ಪೋಲಿಸರು ಬೆಳಿಗ್ಗೆ 10.00 ರಿಂದ 11.00 ಗಂಟೆಯವರೆಗೆ ಮಹಜರ್ ಜರುಗಿಸಿದರು ಎಂದರೆ ಸರಿ. ಸದರಿ ದಾಖಲೆಗೆ ಚಾಸಾ 1 ರವರು ಸಹ ಸಹಿಯನ್ನು ಮಾಡಿದರು ಎಂದರೆ ಸರಿ.

<u>ಪಾಟೀ ಸವಾಲುಃ ಆರೋಪಿತರ ಪರಃ ಶ್ರೀ.   ವಕೀಲರಿಂದ</u>

3. ತಕ್ಷೀರು ಸ್ಥಳಕ್ಕೆ ನಾನು ಹೋಗಿಲ್ಲ, ನಿಪಿ  2 ಕ್ಕೆ ಠಾಣೆಯಲ್ಲಿ ಸಹಿಯನ್ನು ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಿಪಿ 2 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ.

ಮರುವಿಚಾರಣೆಃ ಇಲ್ಲ

ನನ್ನ ಉಕ್ತಲೇಖನಾ ರೀತ್ಯಾ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಲಾಗಿ ಕೇಳಿ ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ,
ಬಂಟ್ವಾಳ